

ವಿಧಾನಪರಿಷತ್ ವಿರೋಧ ಪಕ್ಷದ ನೂತನ ನಾಯಕ ಕೋಟ ಶ್ರೀನಿವಾಸ ಪೂಜಾರಿ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಸನ್ಮಾನಿಸಿದರು.

# ವಿರೋಧ ಪಕ್ಷದ ನಾಯಕನ ಜವಾಬ್ದಾರಿ ಹೆಚ್ಚು; ಹೊರಟ್ಟಿ

**ಬೆಂಗಳೂರ:** ಕರ್ನಾಟಕ ವಿಧಾನ ಪರಿಷತ್ ವಿರೋಧ ಪಕ್ಷದ ನೂತನ ನಾಯಕರಾಗಿ ಆಯ್ಕೆಯಾದ ಕೋಟ ಶ್ರೀನಿವಾಸ ಪೂಜಾರಿಯವರು ಸೋಮವಾರ ಬೆಂಗಳೂರಿನಲ್ಲಿ ಕುಟುಂಬ ಸಮೇತ ಆಗಮಿಸಿ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಗೌರವಿಸಿ ಹೊಸ ವರ್ಷದ ಶುಭಾಶಯ ವಿನಿಮಯ ಮಾಡಿಕೊಂಡರು.

ತಮ್ಮ ಸಹಕಾರ ಮಾರ್ಗದರ್ಶನ ಸದಾ ನನಗೆ ಇರಲಿ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಕೋಟ ಶ್ರೀನಿವಾಸ ಪೂಜಾರಿ ಅವರು ಕೋರಿದರು. ಇದೇ ವೇಳೆ ಕೋಟ ಶ್ರೀನಿವಾಸ ಪೂಜಾರಿ ಅವರಿಗೆ ಪುಷ್ಪಗುಚ್ಛ ನೀಡಿದ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ವಿರೋಧ ಪಕ್ಷದ ನಾಯಕನ ಜವಾಬ್ದಾರಿ ಅತ್ಯಂತ ಮಹತ್ವದ್ದು ತಾವು ತಮ್ಮ ಅಪಾರ ಅನುಭವ ವಿಧಾನ ಪರಿಷತ್ತಿಗೆ ನೀಡುವ ಮೂಲಕ ನಾಡಿನ ಹಿತ ಕಾಯುವಲ್ಲಿ ನಾಡು ಕಟ್ಟುವಲ್ಲಿ ತಮ್ಮ ಜವಾಬ್ದಾರಿ ಹೆಚ್ಚಿದೆ. ಈ ಅವಕಾಶ ಸದುಪಯೋಗ ಮಾಡಿಕೊಂಡು ನಾಡಿನ ಅಭಿವೃದ್ಧಿಗೆ ತಮ್ಮದೆಯಾದ ಕೊಡುಗೆ ನೀಡುತ್ತಿರೆಂಬ ಆಶಯ ನನಗಿದೆ ಎಂದರು.

ಈ ವೇಳೆ ಕೋಟ ಶ್ರೀನಿವಾಸ್ ಪೂಜಾರಿ ಅವರ ಕುಟುಂಬ ವರ್ಗದವರು ವಿಧಾನ ಪರಿಷತ್ ಸದಸ್ಯರು, ಹಿರಿಯ ಅಧಿಕಾರಿಗಳು ಮುಂತಾದವರು ಉಪಸ್ಥಿತರಿದ್ದರು.

# ಬಸವರಾಜ ಹೊರಟ್ಟಿ ಅವರಿಗೆ ಗೌರವ ಸನ್ಮಾನ



**ಬೆಂಗಳೂರ :** ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನೂತನ ನಾಯಕರಾಗಿ ಆಯ್ಕೆಯಾದ ಕೋಟ ಶ್ರೀನಿವಾಸ್ ಪೂಜಾರಿಯವರು ಇಂದು ಬೆಂಗಳೂರಿನಲ್ಲಿ ಕುಟುಂಬ ಸಮೇತ ಆಗಮಿಸಿ ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನು ಗೌರವಿಸಿ ಹೊಸ ವರ್ಷದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು ತಮ್ಮ ಸಹಕಾರ ಮಾರ್ಗದರ್ಶನ ಸದಾ ನನಗೆ ಇರಲಿ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನು  ಕೋಟಾ ಶ್ರೀನಿವಾಸ್ ಪೂಜಾರಿ ಅವರು ಕೋರಿದರು. ಇದೇ ಸಂದರ್ಭದಲ್ಲಿ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಕೋಟ ಶ್ರೀನಿವಾಸ್ ಪೂಜಾರಿ ಅವರಿಗೆ ಪುಷ್ಪಗುಚ್ಛ ನೀಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಹೊರಟ್ಟಿ ಅವರು ವಿರೋಧ ಪಕ್ಷದ ನಾಯಕನ ಜವಾಬ್ದಾರಿ ಅತ್ಯಂತ ಮಹತ್ವದ್ದು ತಾವು ತಮ್ಮ ಅಪಾರ ಅನುಭವವನ್ನು ವಿಧಾನ ಪರಿಷತ್ತಿಗೆ ನೀಡುವ ಮೂಲಕ ನಾಡಿನ ಹಿತ ಕಾಯುವಲ್ಲಿ ನಾಡು ಕಟ್ಟುವಲ್ಲಿ ತಮ್ಮ ಜವಾಬ್ದಾರಿ ಸಹ ಹೆಚ್ಚಿದೆ ಈ ಅವಕಾಶವನ್ನು ಸದುಪಯೋಗ ಮಾಡಿಕೊಂಡು ನಾಡಿನ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಯನ್ನು ನೀಡುತ್ತೀರಿ ಎಂಬ ಆಶಯ ನನಗೆ ಇದೆ ಎಂದು ಹೇಳಿ ಮತ್ತೊಮ್ಮೆ ಶುಭ ಕೋರಿದರು. ಈ ಸಂದರ್ಭದಲ್ಲಿ ಕೋಟ ಶ್ರೀನಿವಾಸ್ ಪೂಜಾರಿಯವರ ಕುಟುಂಬ ವರ್ಗದವರು ವಿಧಾನ ಪರಿಷತ್ ಸದಸ್ಯರು ಹಿರಿಯ ಅಧಿಕಾರಿಗಳು ಮುಂತಾದವರು ಉಪಸ್ಥಿತರಿದ್ದರು.

# ಬಸವರಾಜ ಹೊರಟ್ಟಿಯವರಿಗೆ ಗೌರವ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಧಾನ ಪರಿಷತ್ತಿನ ವಿರೋಧ ಪಕ್ಷದ ನೂತನ ನಾಯಕರಾಗಿ ಆಯ್ಕೆಯಾದ ಕೋಟ ಶ್ರೀನಿವಾಸ್ ಪೂಜಾರಿಯವರು ಸೋಮವಾರ ಬೆಂಗಳೂರಿನಲ್ಲಿ ಕುಟುಂಬ ಸಮೇತ ಆಗಮಿಸಿ ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನು ಗೌರವಿಸಿ, ಹೊಸ ವರ್ಷದ ಶುಭಾಶಯಗಳನ್ನು ವಿನಿಮಯ ಮಾಡಿದರು.

ಇದೇ ಸಂದರ್ಭದಲ್ಲಿ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಕೋಟ ಶ್ರೀನಿವಾಸ್ ಪೂಜಾರಿ ಅವರಿಗೆ ಪುಷ್ಪಗುಚ್ಛ ನೀಡಿ ಅಭಿನಂದಿಸಿ ಮಾತನಾಡಿ, ವಿರೋಧ ಪಕ್ಷದ ನಾಯಕನ ಜವಾಬ್ದಾರಿ ಅತ್ಯಂತ ಮಹತ್ವದ್ದು. ತಾವು ತಮ್ಮ ಅಪಾರ ಅನುಭವವನ್ನು ವಿಧಾನ ಪರಿಷತ್ತಿಗೆ ನೀಡುವ ಮೂಲಕ ನಾಡಿನ ಹಿತ ಕಾಪಾಡಿ, ನಾಡಿನ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಯನ್ನು ನೀಡುತ್ತೀರಿ ಎಂಬ ಆಶಯ ನನಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೋಟ ಶ್ರೀನಿವಾಸ್ ಪೂಜಾರಿಯವರ ಕುಟುಂಬ ವರ್ಗದವರು, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.